ಓ.ಎಸ್.ನಂ.30/2024

ಪಿ ಡಬ್ಲ್ಯೂ: 2

ದಿನಾಂಕ 02.04.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಪಾಟೀ ಸವಾಲುಃ 1 ರಿಂದ 5 ನೇ ಪ್ರತಿವಾದಿ ಪರ ವಕೀಲರಿಂದಃ**

ನಾನು ರಾಣೆಬೆನ್ನೂರಿನ ವಾಸಿಯಾಗಿರುತ್ತೇನೆ. ನಾನು ಆಯುರ್ವೇದಿಕ ವೈಧ್ಯನಾಗಿರುತ್ತೇನೆ. ನಾನು ರಾಣೆಬೆನ್ನೂರಿನ ವಾಗಿಶ ನಗರದಲ್ಲಿ ವಾಸ ಇರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳಿಗೆ ನಾನೇ ಮಾಹಿತಿ ನೀಡಿರುತ್ತೇನೆ. ನಾನು ದಾವಾ ಆಸ್ತಿಗೆ ಕುರಿತ ದಾಖಲೆಗಳನ್ನು ನೋಡಿರುವುದಿಲ್ಲ. ವಾದಿಗಳ ಪೂರ್ವಜರ ಬಗ್ಗೆ ನನಗೆ ಮಾಹಿತಿ ಇರುತ್ತದೆ. 1 ನೇ ವಾದಿಯ ಗಂಡನ ಹೆಸರು ಚಂದ್ರಪ್ಪ, 2 ನೇ ವಾದಿಯ ಗಂಡನ ಹೆಸರು ದುರ್ಗಪ್ಪ, 13 ನೇ ವಾದಿಯ ಗಂಡನ ಹೆಸರು ಹನುಮಂತಪ್ಪ ಆಗಿರುತ್ತದೆ. 2 ನೇ ವಾದಿಯ ಹೆಸರಿನಲ್ಲಿ ಇರುವ ಸಿ ಟಿ ಎಸ್ ಆಸ್ತಿಯ ಬಗ್ಗೆ ನನಗೆ ಗೊತ್ತಿಲ್ಲ.

**2.** 12 ನೇ ವಾದಿಯ ಹೆಸರಿನಲ್ಲಿರುವ ಸಿ ಟಿ ಎಸ್ ಆಸ್ತಿಯ ಬಗ್ಗೆ ನನಗೆ ಗೊತ್ತಿಲ್ಲ. ನನ್ನ ಆಸ್ಪತ್ರೆಗೆ ವಾದಿಗಳು ಬಂದು ಹೋಗುವ ಕಾರಣ ಅವರ ಬಗ್ಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು 1928 ರಿಂದ 1 ನೇ ಪ್ರತಿವಾದಿಯ ಹೆಸರಿನಲ್ಲಿ ಇರುವ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಬಗ್ಗೆ ನನಗೆ ಮಾಹಿತಿ ಇಲ್ಲದಿದ್ದರೂ ಸಹ ನಾನು ವಾದಿಯರ ಪರ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಕಂದಾಯ ದಾಖಲೆಗಳು ಪ್ರತಿವಾದಿಯರ ಹೇಸರಿನಲ್ಲಿ ಇರುವ ಬಗ್ಗೆ ನನಗೆ ಗೊತ್ತಿಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು.

ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.

ಪಿ ಡಬ್ಲ್ಯೂಃ 3

ದಿನಾಂಕ 02.04.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಪಾಟೀ ಸವಾಲುಃ 1 ರಿಂದ 5 ನೇ ಪ್ರತಿವಾದಿ ಪರ ವಕೀಲರಿಂದಃ**

ನಾನು ಕೂಲಿ ಕೆಲಸ ಮಾಡಿಕೊಂಡಿರುತ್ತೇನೆ. ನಮ್ಮ ಮನೆ ಚೌಡಮ್ಮ ದೇವಸ್ಥಾನದ ಬಳಿ ಇದೆ ಎಂದರೆ ಸರಿ. ಸಾಕ್ಷಿ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳ ಬಗ್ಗೆ ಓದಿ ತಿಳಿದುಕೊಂಡಿರುತ್ತೇನೆ. ವಾದಿಗಳ ಪೂರ್ವಜರ ಬಗ್ಗೆ ನನಗೆ ಮಾಹಿತಿ ಇರುತ್ತದೆ.ಆ ಬಗ್ಗೆ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ವಾದಿಗಳ ಹೆಸರುಗಳನ್ನು ಬರೆಸಿರುತ್ತೇನೆ. 1 ನೇ ವಾದಿಯ ಗಂಡನ ಹೆಸರು ಸಣ್ಣನಿಂಗಪ್ಪ. ಆತನು ತನ್ನ ಜೀವಂತ ಕಾಲದಲ್ಲಿ ದಾವಾ ಆಸ್ತಿಯ ಕುರಿತು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಎಂದರೆ ಸರಿ.

**2.** 2 ನೇ ವಾದಿಯ ಹೆಸರಿನಲ್ಲಿ ಸಿ ಟಿ ಎಸ್ ಆಸ್ತಿ ಇದೆ ಎಂದರೆ ಸರಿ. ಅದರ ನಂಬರ್ ನನಗೆ ಗೊತ್ತಿಲ್ಲ. 12 ನೇ ವಾದಿಯ ಹೆಸರಿನಲ್ಲಿ ಇರುವ ಸಿ ಟಿ ಎಸ್ ಆಸ್ತಿ ಸಂಖ್ಯೆ 1725 ಆಗಿದ್ದು, ಆ ಕುರಿತು ನಾನು ದಾಖಲೆಗಳನ್ನು ನೋಡಿರುವುದಿಲ್ಲ. ಆತನ ಹೆಸರಿನಲ್ಲಿ 1727 ಸಂಖ್ಯೆಯ ಸಿ ಟಿ ಎಸ್ ಇದ್ದರು ಸಹ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ವಾದಿಗಳಿಗೆ ಸಂಬಂಧಿಯಾದ ಕಾರಣ ವಾದಿಗಳ ಪರ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು 1928 ರಿಂದ 1 ನೇ ಪ್ರತಿವಾದಿಯ ಹೆಸರಿನಲ್ಲಿ ಇರುವ ಬಗ್ಗೆ ನನಗೆ ಗೊತ್ತಿಲ್ಲ. ನನಗೆ ದಾವಾ ಆಸ್ತಿಯ ಕುರಿತು ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ವಾದಿಗಳ ಪರ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ವಾದಿಗಳು ಎಂದಿಗೂ ವಾಸ ಇರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು.　　　　ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.　　　　ಪ್ರಧಾನ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.

ಓ.ಎಸ್.ನಂ.30/2024

ಪಿ ಡಬ್ಲ್ಯೂ: 4

ದಿನಾಂಕ 02.04.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಪಾಟೀ ಸವಾಲು: 1 ರಿಂದ 5 ನೇ ಪ್ರತಿವಾದಿ ಪರ ವಕೀಲರಿಂದ:**

ನಾನು ಹಮಾಲಿ ಕೆಲಸ ಮಾಡಿಕೊಂಡಿದ್ದು ಈಗ ವಯಸ್ಸಾದ ಕಾರಣ ಯಾವುದೇ ಕೆಲಸ ಮಾಡಿಕೊಂಡಿರುವುದಿಲ್ಲ. ನಮ್ಮ ಮನೆ ಚೌಡಮ್ಮ ದೇವಸ್ಥಾನದ ಬಳಿ ಇದೆ ಎಂದರೆ ಸಾಕ್ಷಿಯು ರೈಲ್ವೆ ನಿಲ್ದಾಣದ ಬಳಿ ತಳವಾರ ಓಣಿಯಲ್ಲಿ ಇರುವುದಾಗಿ ನುಡಿಯುತ್ತಾರೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳನ್ನು ಓದಲು ಬರುವುದಿಲ್ಲ. ದಾವಾ ಆಸ್ತಿಯ ಸಿ ಟಿ ಎಸ್ ಸಂಖ್ಯೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು 1928 ರಿಂದ 1 ನೇ ಪ್ರತಿವಾದಿಯ ಹೆಸರಿನಲ್ಲಿ ಇರುವ ಬಗ್ಗೆ ನನಗೆ ಗೊತ್ತಿಲ್ಲ. ಆ ಬಗ್ಗೆ ಕಂದಾಯ ಪಾವತಿ ಮಾಡುತ್ತಿರುವ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಬಗ್ಗೆ ವ್ಯಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿ. ನಾನು ವಾದಿಗಳಿಗೆ ಅನೂಕುಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.